# ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560001.

ಸಂಖ್ಯೆ:DPI-CPIO-C7(2) (USM)01/2023 ಕಂನಂ.986654 ದಿನಾಂಕ:02-3-2023

## ಅಧಿಕೃತ ಜ್ಞಾಪನ

ವಿಷಯ: 2023-24ನೇ ಸಾಲಿಗೆ ಖಾಸಗಿ ಶಾಲೆಗಳಿಗೆ ಹೊಸದಾಗಿ ಶಾಶ್ವತ ಅನುದಾನರಹಿತ ಪೂರ್ವ ಪ್ರಾಥಮಿಕ / ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ನೋಂದಣಿ (Registration) ಮಾನ್ಯತೆ, ಮಾನ್ಯತೆ ನವೀಕರಣ, ಮತ್ತು ನಿರಾಕ್ಷೇಪಣಾ ಪತ್ರಕ್ಕಾಗಿ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ; 1) ಈ ಕಛೇರಿ ಸುತ್ತೋಲೆ ಸಂಖ್ಯೆ:ಸಿ7(2)ಪ್ರಾಶಿಅ.ಹೊ.ಖಾ.ಶಾ.ನೋಂ.01/2022-23, ದಿನಾಂಕ:16-12-2022

2) ಈ ಕಛೇರಿ ಸುತ್ತೋಲೆ ಸಂಖ್ಯೆ:ಸಿ7(3)ಪ್ರಾಶಿಅ. ಖಾ.ಶಾ.ಮಾ.ನ.01/2021-22, ದಿನಾಂಕ:07-12-2021

*********

ಖಾಸಗಿ ಅನುದಾನರಹಿತ ಪೂರ್ವ ಪ್ರಾಥಮಿಕ / ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಹೊಸ ಶಾಲಾ ನೋಂದಣಿ (Registration) ಮಾನ್ಯತೆ, ಮಾನ್ಯತೆ ನವೀಕರಣ, (FR/RR) ಮತ್ತು ನಿರಾಕ್ಷೇಪಣಾ ಪತ್ರ (NOC) ಕೋರಿ ಅರ್ಜಿ ಸಲ್ಲಿಸುವಂತಹ ಆಡಳಿತ ಮಂಡಳಿಗಳು ಸಂಸ್ಕರಣಾ ಶುಲ್ಕವನ್ನು ಕೆ-2 ಚಲನ್ ಮುಖಾಂತರ ಪಾವತಿಸಬೇಕಾಗಿದ್ದು ಕೆಳಕಂಡ ಲೆಕ್ಕ ಶೀರ್ಷಿಕೆಗಳಿಗೆ ಶುಲ್ಕ ಪಾವತಿಸಲು ಸೂಚಿಸಲಾಗಿದೆ.

| ಕ್ರಮ ಸಂಖ್ಯೆ | ವಿವರ | ಲೆಕ್ಕಶೀರ್ಷಿಕೆ | ಉದ್ದೇಶ | ಉಪ ಉದ್ದೇಶದ ಹೆಸರು |
|---|---|---|---|---|
| 1. | ಹೊಸ ಶಾಲೆಗಳ ನೋಂದಣಿ | 0202-01-102-1-01-000 | Secondary education and other fees | New school registration |
| 2. | ಮಾನ್ಯತೆ/ಮಾನ್ಯತೆ ನವೀಕರಣ | 0202-01-102-3-01-000 | Fees from Management | - |
| 3. | ನಿರಾಕ್ಷೇಪಣಾ ಪತ್ರ | 0202-01-102-1-01-000 | Secondary education and other fees | Processing fees or other fees |

ಕೆ-2 ಚಲನ್‌ನಲ್ಲಿ ಸಂಬಂಧಿಸಿದ ಲೆಕ್ಕಶೀರ್ಷಿಕೆಗೆ ಜಮಾ ಮಾಡತಕ್ಕದ್ದು ಈ ರೀತಿ ಜಮಾ ಮಾಡಿದ ಅರ್ಜಿಗಳನ್ನು ಮಾತ್ರ ಪರಿಗಣಿಸಲಾಗುವುದು. ಬೇರೆ ಲೆಕ್ಕ ಶೀರ್ಷಿಕೆಗೆ ಪಾವತಿಸಿದ್ದಲ್ಲಿ ಸದರಿ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೂ ಬೇರೆ ಲೆಕ್ಕಶೀರ್ಷಿಕೆಗೆ ಜಮಾ ಮಾಡಿದ ಹಣವನ್ನು ಹಿಂತಿರುಗಿಸಲು ಅವಕಾಶವಿರುವುದಿಲ್ಲವೆಂದು ಸ್ಪಷ್ಟಪಡಿಸುತ್ತಾ ಪರಿಶೀಲಿಸಿ ಕ್ರಮವಾಗಿ ಸಲ್ಲಿಸಲು ಸೂಚಿಸಿದೆ.

(ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಂದ ಅನುಮೋದಿಸಲ್ಪಟ್ಟಿದೆ)

R. [signature]

**ಆಯುಕ್ತರು**
**ಸಾರ್ವಜನಿಕ ಶಿಕ್ಷಣ ಇಲಾಖೆ.**

**ಇವರಿಗೆ:**

01.ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ ಅಗತ್ಯ ಕ್ರಮಕ್ಕಾಗಿ.

02.ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು ಮಾಹಿತಿಗಾಗಿ:**

01. ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
02. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರ್ಗಿ ವಿಭಾಗ.
03. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ ಅಗತ್ಯ ಕ್ರಮಕ್ಕಾಗಿ.
04. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದಕ್ಕಾಗಿ.
05. ಹಿರಿಯ ಸಹಾಯಕ ನಿರ್ದೇಶಕರು, ಎಸ್.ಎ.ಟಿ.ಎಸ್., ವಿಭಾಗ, ಇವರು ತಂತ್ರಾಂಶವನ್ನು ರೂಪಿಸುವುದು ಹಾಗೂ ರೂಪಿಸಿದ ಮಾರ್ಪಾಡುಗಳನ್ನು ತಂತ್ರಾಂಶದಲ್ಲಿ ಸಮರ್ಪಕವಾಗಿ ಅಳವಡಿಸಿ ತಂತ್ರಾಂಶದಲ್ಲಿ ಕಾರ್ಯನಿರ್ವಹಿಸುವಂತೆ programming ಮಾಡಿ ಕ್ರಮವಹಿಸುವುದು.
06. ಕಛೇರಿ ಪ್ರತಿ.